ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ನೇಮಕ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 9/4/21

# ಕೆಪಿಎಸ್‌ಸಿ ಸದಸ್ಯರಾಗಿ ಡಾ. ಪ್ರಭುದೇವ್ ನೇಮಕ

ಉವಾ 9/4/21



ಬೆಂಗಳೂರು: ಕೌಶಲ್ಯಾಭಿವೃದ್ಧಿ ಹಾಗೂ ಜೀವನೋಪಾಯ ಇಲಾಖೆಯಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರಾಗಿರುವ ಡಾ. ಬಿ. ಪ್ರಭುದೇವ್ ಅವರನ್ನು ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯರನ್ನಾಗಿ ರಾಜ್ಯ ಸರ್ಕಾರ ನೇಮಿಸಿದೆ. ಡಾ. ಬಿ. ಪ್ರಭುದೇವ್ ಮೂಲತಃ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ನೆಲಮನೆ ಗ್ರಾಮದವರು. ಪಾಂಡವಪುರದಲ್ಲಿ ಪ್ರಾಥಮಿಕ ಶಿಕ್ಷಣ ಪೂರೈಸಿ, ಮೈಸೂರಿನ ಮರಿಮಲ್ಲಪ್ಪ ಶಾಲೆಯಲ್ಲಿ ಪ್ರೌಢ ಶಿಕ್ಷಣ ಪಡೆದರು. ಮಂಡ್ಯ ಜಿಲ್ಲೆಯ ಪಿಇಎಸ್ ಕಾಲೇಜಿನಲ್ಲಿ ಬಿ.ಇ. ಪದವಿ, ಮೈಸೂರಿನ ವಿವಿಯಲ್ಲಿ ವ್ಯವಹಾರ ಆಡಳಿತ ವಿಷಯದಲ್ಲಿ ಸ್ನಾತಕೋತ್ತರ ಪದವಿ, ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿಯಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಪಿಹೆಚ್ಡಿ ಪದವಿ ಪಡೆದರು. ಬೆಂಗಳೂರಿನ ಪ್ರತಿಷ್ಠಿತ ಕಂಪೆನಿಯಲ್ಲಿ ವೃತ್ತಿ ಜೀವನ ಆರಂಭಿಸಿದರು. ಕನ್ನಡ ಮಾಧ್ಯಮದಲ್ಲಿ ಕರ್ನಾಟಕ ಆಡಳಿತ ಸೇವೆ ಪರೀಕ್ಷೆ ಬರೆದಿರುವ ಇವರು ವಾಣಿಜ್ಯ ತೆರಿಗೆ ಅಧಿಕಾರಿಯಾಗಿ, ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಕರಕುಶಲ ಅಭಿವೃದ್ಧಿ ನಿಗಮ, ಹಟ್ಟಿ ಚಿನ್ನದ ಗಣಿ, ಪರಿಸರ ಪ್ರವಾಸೋದ್ಯಮ ನಿಗಮಗಳಲ್ಲಿ ಪ್ರಧಾನ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸಿದ್ದಾರೆ.